ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಬೆಂಗಳೂರಿನ ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳೆಯರ ಮೇಲೆ ನಿರಂತರ ಶೋಷಣೆ ಹಾಗೂ ದೂರು ಕುರಿತು

ಶ್ರೀಹೆಚ್.ಎಂ.ರಮೇಶ್‌ಗೌಡ(ವಿಧಾನಸಭೆಯಿಂದಚುನಾಯಿತರಾದವರು):-

244 (343) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನ ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳೆಯರ ಮೇಲೆ ನಿರಂತರ ಶೋಷಣೆ ನಡೆಯುತ್ತಿದೆ ಎನ್ನುವ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಗಾರ್ಮೆಂಟ್ಸ್ ಮಹಿಳೆಯರ ಹಕ್ಕುಗಳ ರಕ್ಷಣೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ರಾಜ್ಯದ ಅಸಂಘಟಿತ ಕಾರ್ಮಿಕರ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಇನ್ನೂ ಬಾಲಕಾರ್ಮಿಕರನ್ನು ನಿಯೋಜಿಸಿ ಕೊಳ್ಳಲಾಗುತ್ತಿದೆ ಎನ್ನುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವರಿಗೆ ಯಾವ ಶಿಕ್ಷೆ ನೀಡಲಾಗುತ್ತಿದೆ ;

(ಈ) ಜಿಲ್ಲಾ ಕೇಂದ್ರಗಳ ಕಾರ್ಮಿಕ ಸಾಮಾಜಿಕ ಭದ್ರತೆಗೆ ಸರ್ಕಾರ ಯಾವ ಯೋಜನೆಗಳನ್ನು ಜಾರಿಗೊಳಿಸಿದೆ ; (ಮಾಹಿತಿ ನೀಡುವುದು)

(ಉ) ಕಾರ್ಮಿಕರ ಭವಿಷ್ಯದ ದೃಷ್ಟಿಯಿಂದ ಈಗ ಇರುವ ಕಾರ್ಮಿಕರ ಕಲ್ಯಾಣ ನಿಧಿ ಯೋಜನೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ?